# ವ್ಯವಹಾರ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಆಲೂರು.

## ಸಿ.ಸಿ.ಸಂಖ್ಯೆ: 262/2020

| | | |
|---|---|---|
| ಸಾಕ್ಷಿದಾರರ ಹೆಸರು | ಚನ್ನೇಗೌಡ | ಸಿ.ಡಬ್ಲ್ಯೂ: 4 |
| ಗಂಡನ / ತಂದೆ ಹೆಸರು | ನಂಜುಂಡೇಗೌಡ | ಪಿ.ಡಬ್ಲ್ಯೂ: 5 |
| ವಯಸ್ಸು | 59 ವರ್ಷ | |
| ಉದ್ಯೋಗ | ಪಿ.ಎಸ್.ಐ | |
| ವಾಸಸ್ಥಳ | ಹಾಸನ | |

ಪ್ರಮಾಣ ವಚನ ಬೋಧಿಸಲಾಯಿತು.

ದಿಃ 13.03.2026

**ಮುಖ್ಯ ವಿಚಾರಣೆಃ ಸಸಅ ರಿಂದ**

ದಿಃ 17.08.2017 ರಿಂದ 25.11.2025 ರವರೆಗೆ ಆಲೂರು ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ. ದಿ.18.03.2020 ರಂದು ಬೆ.9.30 ಕ್ಕೆ ಚಾಸಾ 1, 6 ಹಾಗೂ ನಾನು ಗಸ್ತಿನಲ್ಲಿದ್ದಾಗ ಬಿಜ್ಜನಹಳ್ಳಿ ಬಸ್ ನಿಲ್ದಾಣದಲ್ಲಿ ಒಬ್ಬ ವ್ಯಕ್ತಿ ಬಿಳಿ ಚೀಲ ಹಿಡಿದು ನಿಂತಿದ್ದು ಸಮವಸ್ತ್ರದಲ್ಲಿದ್ದ ನಮ್ಮನ್ನು ನೋಡಿ ಓಡಿ ಹೋಗಲು ಪ್ರಯತ್ನಿಸಿದ್ದು ಅವನನ್ನು ಹಿಡಿದು ಪಂಚರನ್ನು ಬರಮಾಡಿಕೊಂಡು ಚಾಸಾ 2 ಮತ್ತು 3 ರವರ ಸಮಕ್ಷಮ ಬಿಳಿ ಚೀಲ ತೆರೆದು ನೋಡಲಾಗಿ ಅದರಲ್ಲಿ 90 ಎಂ.ಎಲ್. ನ 30 ಒರಿಜಿನಲ್ ಚಾಯ್ಸ್ ಟೆಟ್ರಾ ಪ್ಯಾಕ್ ಗಳು ದೊರಕಿದ್ದು ಅವುಗಳ ಪರವಾನಗಿ ಬಗ್ಗೆ ವಿಚಾರಿಸಲಾಗಿ ಇಲ್ಲ ಎಂದು ತಿಳಿಸಿದ್ದು ಆತನ ಹೆಸರು ಮಂಜುನಾಥ್ ಬಿನ್ ದೊಡ್ಡ ಈರಯ್ಯ ಎಂದು ತಿಳಿಸಿರುತ್ತಾನೆ. ಅವುಗಳ ಪೈಕಿ ಒಂದನ್ನು ಎಫ್.ಎಸ್.ಎಲ್ ಗೆ ರಾಸಾಯನಿಕ ಪರೀಕ್ಷೆಗಾಗಿ ತೆಗೆದಿರಿಸಿ ಬಿಳಿ ಬಟ್ಟೆಯಿಂದ ಸುತ್ತಿ ಮ.1 – 2 ರವರೆಗೂ ಮಹಜರ್ ಮುಖಾಂತರ ಅಮಾನತ್ತುಪಡಿಸಿಕೊಂಡಿರುತ್ತೇವೆ.

ಸಾಕ್ಷಿ ನಿಪಿ 2 ರಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ 2ಡಿ ಎಂದು ಗುರುತಿಸಲಾಯಿತು. ನ್ಯಾಯಾಲಯದ ಮುಂದಿರುವ ಮು.ಮಾ.1 ಮತ್ತು 2 ನ್ನು ನೋಡಿ ಗುರುತಿಸಿರುತ್ತಾರೆ. ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ಅವರ ಗುರುವಿಕೆಗೆ ಆರೋಪಿ ಪರ ವಕೀಲರಿಂದ ಆಕ್ಷೇಪಣೆ ಇರುವುದಿಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ**

ಕಣದಳ್ಳಿಯಿಂದ ಘಟನಾ ಸ್ಥಳ 2-3 ಕಿ.ಮೀ. ಅಂತರ ಇರುತ್ತದೆ. ಬಿಜ್ಜನಹಳ್ಳಿ ಬಸ್ ನಿಲ್ದಾಣದ ಬಳಿ ಇದ್ದಾಗ ಆರೋಪಿ ಓಡಿ ಹೋಗಲು ಪ್ರಯತ್ನಿಸಿರುತ್ತಾನೆ. ಬಿಜ್ಜನಹಳ್ಳಿ ಬಸ್ ನಿಲ್ದಾಣದಿಂದ ಪೂರ್ವದಿಂದ ಪಶ್ಚಿಮಕ್ಕೆ ಮರಸುಯಿಂದ ರಸ್ತೆ ಇದೆ ಎಂದರೆ ಸರಿ. ದಕ್ಷಿಣಕ್ಕೆ ಉತ್ತರಕ್ಕೆ ರಾಷ್ಟ್ರೀಯ ಹೆದ್ದಾರಿ ಇದೆ ಎಂದರೆ ಸರಿ. ಬಿಜ್ಜನಹಳ್ಳಿ ಬಸ್ ನಿಲ್ದಾಣದಿಂದ ಮುಖ್ಯ ರಸ್ತೆ 2 ಕಿ.ಮೀ. ಅಂತರ ಇದೆ ಎಂದರೆ ಸರಿಯಲ್ಲ. ಪಕ್ಕದಲ್ಲಿದೆ. ಮುಖ್ಯ ರಸ್ತೆಯಿಂದ 500 ಮೀ. ಅಂತರದಲ್ಲಿ ಕಣದಳ್ಳಿ ಇದೆ ಎಂದರೆ ಸರಿ. ನಾವು ಯಾವುದೇ ದಾಳಿ ನಡೆಸಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ 2 ರಡಿಯಲ್ಲಿ ಆರೋಪಿಯ ವಶದಿಂದ ಮು.ಮಾ.1 ಮತ್ತು 2 ನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಗೂ ಈ ಪ್ರಕರಣಕ್ಕೂ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಿರುತ್ತೇನೆ.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.

(ಶ್ರೀಮತಿ ಸ್ನೇಹ ಎಂ.)
ವ್ಯವಹಾರ ನ್ಯಾಯಾಧೀಶರು,
ಮತ್ತು ಜೆಎಂಎಫ್ ಸಿ, ಆಲೂರು .